ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1799 (2161)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಸಣ್ಣ ನೀರಾವರಿ ಸಚಿವರು

ವಿಷಯ : ಕಳಪೆ ಕಾಮಗಾರಿ ನಿರ್ವಹಿಸಿರುವ ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಳೆಹಾನಿ ದುರಸ್ಥಿ ಕಾಮಗಾರಿ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳು ಯಾವುವು; (ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಮಳೆಹಾನಿ ದುರಸ್ಥಿ ಕಾಮಗಾರಿ ಯೋಜನೆಯಡಿ ಉಯ್ಯನಹಳ್ಳಿ ಪಿಕಫ್, ಗೆಜ್ಜೆಹೊಸಹಳ್ಳಿ, ಮಾದಹಳ್ಳಿ, ಕಸುವಿನಕಟ್ಟೆ ಮತ್ತು ಬಿ.ಶ್ರೀರಾಮನಹಳ್ಳಿ ಗ್ರಾಮಗಳ ಎಲ್ಲೆಯಲ್ಲಿ ಬರುವ ಕೆರೆ-ಕಟ್ಟೆಗಳ ದುರಸ್ಥಿ ಕಾಮಗಾರಿಗಳ ಅಂದಾಜು ಮೊತ್ತ 150.00ಲಕ್ಷ ಸದರಿ ಕಾಮಗಾರಿಗಳಲ್ಲಿ ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಕಳಪೆ ಕಾಮಗಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಸಂಬಂಧ ಕಾಮಗಾರಿ ಗುಣಮಟ್ಟ ಪರಿಶೀಲನಾ ತಂಡ ಸದರಿ ಕಾಮಗಾರಿಯನ್ನು ಪರಿಶೀಲಿಸಿದೆಯೇ; (ಪರಿಶೀಲಿಸಿದ್ದಲ್ಲಿ, ಸಂಪೂರ್ಣ ವರದಿ ನೀಡುವುದು)

(ಈ) ಕಳಪೆ ಕಾಮಗಾರಿ ನಿರ್ವಹಿಸಿರುವ ಗುತ್ತಿಗೆದಾರರು ಮತ್ತು ಇದಕ್ಕೆ ನೆರವಾದ ಅಭಿಯಂತರರ ವಿರುದ್ಧ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)